ಕರ್ನಾಟಕ ಸರ್ಕಾರ

ಸಂಖ್ಯೆ: ಇಎನ್ 70 ವಿಎಸ್‌ಸಿ 2015

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 10.12.2015

## ಸುತ್ತೋಲೆ

ವಿಷಯ: ಕಟ್ಟಡಗಳ ಮೇಲ್ಛಾವಣಿಗಳ ಮೇಲೆ ಸೌರ ಶಕ್ತಿ ಉತ್ಪಾದನಾ ಘಟಕಗಳನ್ನು ಪ್ರೋತ್ಸಾಹಿಸುವ ಕುರಿತು.

*****

1. ಸೌರ ನೀತಿ 2014–21ರನ್ವಯ ಸೋಲಾರ್ ವಿದ್ಯುತ್ ಉತ್ಪಾದನೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಹಾಲಿ ವಿದ್ಯುತ್ ಸಂಪರ್ಕ ಪಡೆದಿರುವ ಕಟ್ಟಡಗಳ ಮೇಲ್ಛಾವಣಿಗಳಲ್ಲಿ ಸೋಲಾರ್ ಪ್ಯಾನಲ್‌ಗಳನ್ನು ಅಳವಡಿಸಲು ನೆಟ್ ಮೀಟರಿಂಗ್ ವ್ಯವಸ್ಥೆಯಡಿಯಲ್ಲಿ ವಿದ್ಯುತ್ ಸರಬರಾಜು ಕಂಪನಿಗಳು ಗ್ರಾಹಕರಿಂದ ಅರ್ಜಿಗಳನ್ನು ಸ್ವೀಕರಿಸುತ್ತಿವೆ.

2. ಸದರಿ ಮೇಲ್ಛಾವಣಿ ವಿದ್ಯುತ್ ಉತ್ಪಾದನೆಗೆ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದವರು ನಿಗಧಿಪಡಿಸಿರುವ ವಿದ್ಯುತ್ ದರವನ್ನು ಪಾವತಿಸಲಾಗುತ್ತಿದೆ.

3. ಆದರೆ ಹೊಸದಾಗಿ ನಿರ್ಮಿಸುತ್ತಿರುವ ಕಟ್ಟಡಗಳಲ್ಲಿ ಮೇಲ್ಛಾವಣಿ ಸೌರ ಘಟಕಗಳ ಅಳವಡಿಕೆಯನ್ನು ಕಟ್ಟಡದ ನಿರ್ಮಾಣದ ಜೊತೆಯಲ್ಲಿಯೇ ನಿರ್ವಹಿಸಿದ್ದಲ್ಲಿ ಮೇಲ್ಛಾವಣಿ ಸೌರ ಫಲಕಗಳನ್ನು ಕಟ್ಟಡ ವಿನ್ಯಾಸಕ್ಕನುಗುಣವಾಗಿ ಸುಭದ್ರ ರೀತಿಯಲ್ಲಿ ಅಳವಡಿಸಲು ಅನುಕೂಲವಾಗುವುದು.

4. ಈ ಹಿನ್ನಲೆಯಲ್ಲಿ ಗ್ರಾಹಕರು ಹೊಸ ಕಟ್ಟಡದ ವಿದ್ಯುತ್ ಸಂಪರ್ಕಕ್ಕೆ ಅರ್ಜಿ ಸಲ್ಲಿಸುವ ಸಮಯದಲ್ಲಿಯೇ ಮೇಲ್ಛಾವಣಿ ಸೌರ ಫಲಕಗಳ ಅಳವಡಿಕೆಗೂ ಸಹ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಆದರೆ ವಿದ್ಯುತ್ ಒಪ್ಪಂದ ಕರಾರು ಪತ್ರವನ್ನು ಚಾಲ್ತಿಯಲ್ಲಿರುವ ಕೆ.ಇ.ಆರ್.ಸಿ ನಿಗಧಿತ ವಿದ್ಯುತ್ ದರದಂತೆ ಒಪ್ಪಂದ ಮಾಡಿಕೊಳ್ಳಲಾಗುವುದು.

5. ಈ ಕರಾರು ಪತ್ರದ ಅವಧಿಯು ಒಂದು ವರ್ಷಕ್ಕೆ ಸೀಮಿತವಾಗಿದ್ದು, ಒಂದು ವರ್ಷದ ಅವಧಿಯೊಳಗೆ ಕಟ್ಟಡ ನಿರ್ಮಾಣ ಪೂರ್ಣಗೊಂಡು ವಿದ್ಯುತ್ ಸಂಪರ್ಕ ಪಡೆದಿರಬೇಕು. ಇಲ್ಲವಾದಲ್ಲಿ ಆನಂತರ ಚಾಲ್ತಿಯಲ್ಲಿರುವ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದವರ ನಿಗಧಿತ ವಿದ್ಯುತ್ ದರವನ್ನು ನಿಗಧಿಪಡಿಸಲಾಗುವುದು.

(ಜಿ.ಎನ್. ಯಡ್ರಾವಿ)
ಸರ್ಕಾರದ ಉಪ ಕಾರ್ಯದರ್ಶಿ
ಇಂಧನ ಇಲಾಖೆ, ಫೋನ್: 22034679

ಇವರಿಗೆ,

1. ವ್ಯವಸ್ಥಾಪಕ ನಿರ್ದೇಶಕರು, ಕ.ವಿ.ಪ್ರ.ನಿ.ನಿ. ಕಾವೇರಿ ಭವನ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕ.ವಿ.ನಿ.ನಿ ನಂ 82 ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು,
   ಬೆ.ವಿ.ಕಂ/ಗು.ವಿ.ಸ.ಕಂ.ನಿ/ಹು.ವಿ.ಸ.ಕಂ.ನಿ/ಮ.ವಿ.ಸ.ಕಂ.ನಿ/ಚಾ.ವಿ.ಸ.ನಿ.ನಿ./ಕೆ.ಆರ್.ಇ.ಡಿ.ಎಲ್/ಪಿ.ಸಿ.ಕೆ.ಎಲ್.
4. ಕಾರ್ಯದರ್ಶಿ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ, ಎಂ.ಜಿ. ರಸ್ತೆ, ಬೆಂಗಳೂರು.
5. ಮುಖ್ಯ ವಿದ್ಯುತ್ ಪರಿವೀಕ್ಷಕರು ಮೈಸುಗರ್ ಬಿಲ್ಡಿಂಗ್ ನೆಲಮಹಡಿ, ಜೆ.ಸಿ ರಸ್ತೆ, ಬೆಂಗಳೂರು.

ಪ್ರತಿ,

1. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ವಿಶೇಷ ಅಧಿಕಾರಿ(ಸುಧಾರಣೆ) ಇಂಧನ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಕಾರ್ಯನಿರ್ವಾಹಕ ಇಂಜಿನಿಯರ್ 1/2/3 ಇ.ಎಂ.ಸಿ /ಯೋಜನೆಗಳು ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
6. ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಪಿಠಾಧಿಕಾರಿಗಳು ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಶಾಖಾಧಿಕಾರಿಗಳು (ವಿದ್ಯುತ್ ಯೋಜನೆ/ಸ್ವೀಮರ) ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.